4) ಅಭಿವೃದ್ಧಿದಾರರು ಕಟ್ಟಡದ ನಿರ್ಮಾಣದ ವೆಚ್ಚ ರೂ. 650 ಪ್ರತಿ ಚ.ಅಡಿಗಿಂತ ಅಥವಾ 6996 ಚ.ಮೀ ಗಿಂತ ಹೆಚ್ಚಾದಲ್ಲಿ ಶೇ 1% ರಷ್ಟು ಕಾರ್ಮಿಕ ಕಲ್ಯಾಣ ಶುಲ್ಕವನ್ನು ಕಟ್ಟಡ ನಿರ್ಮಾಣಕ್ಕೆ ತಗಲುವ ವ್ಯತ್ಯಾಸದ ಮೊತ್ತಕ್ಕೆ ಅನುಗುಣವಾಗಿ ಪೂರ್ಣ ಕಟ್ಟಡದ ವಿಸ್ತೀರ್ಣಕ್ಕೆ ಪಾವತಿಸುವುದು. ಸದರಿ ಮೊತ್ತವನ್ನು ಬಿಡಿಎ ಗಾಗಲಿ ಅಥವಾ ಕಾರ್ಮಿಕ ಇಲಾಖೆಗಾಗಲಿ ಪಾವತಿಸುವುದು.

5) ಅಭಿವೃದ್ಧಿದಾರರು ಕಟ್ಟಡ ಸ್ವಾಧೀನಪಡಿಸಿಕೊಂಡ ನಂತರ, ಬಿಬಿಎಂಪಿ / ಬಿಡಿಎ/ ಶಾಸನಬದ್ಧ ಸಂಸ್ಥೆ ಗಳು ಇನ್ನಾವುದೇ ಶುಲ್ಕಗಳನ್ನು ವಿಧಿಸಿದಲ್ಲಿ ಅದನ್ನು ಸಂದಾಯ ಮಾಡತಕ್ಕದ್ದು.

6) ಅರ್ಜಿದಾರರು ಕಟ್ಟಡಕ್ಕೆ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

7) ಕಟ್ಟಡದ ಗುಣಮಟ್ಟ, ಸುರಕ್ಷತೆ, ದೃಡತೆ / ಭದ್ರತೆ ಹಾಗೂ ಕಟ್ಟಡದ ವಿನ್ಯಾಸ ಗಳಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯಿಂದ ಜವಾಬ್ದಾರರಾಗಿರುವುದಿಲ್ಲ. ಈ ಎಲ್ಲಾ ಅಂಶಗಳಿಗೆ ಅಭಿವೃದ್ಧಿದಾರರೇ ಪೂರ್ಣ ಜವಾಬ್ದಾರರಾಗಿರುತ್ತಾರೆ.

8) ಅರ್ಜಿದಾರರು ನೀರು ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅವಲಂಬಿಸದೆ ನೀರಿಗಾಗಿ ತಮ್ಮ ಸ್ವಂತ ವ್ಯವಸ್ಥೆ ಮಾಡಿಕೊಳ್ಳುತಕ್ಕದ್ದು.

9) ಅರ್ಜಿದಾರರು ಯಾವುದೇ ರೀತಿಯ ಪ್ಲಾಸ್ಟಿಕ್, ಪೇಪರ್, ಗಾರ್ಬೇಜ್ ಇತ್ಯಾದಿ ತ್ಯಾಜ್ಯಗಳನ್ನು ಸಂಗ್ರಹಿಸಿ Dry waste ಮತ್ತು Wet waste ಅನ್ನು ಬೇರ್ಪಡಿಸಿ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

10) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡದ ಪ್ರವೇಶ ದ್ವಾರದಲ್ಲಿ ಒಳಬರುವ ಹಾಗೂ ಹೊರಹೋಗುವ ವಾಹನಗಳಿಗೆ ಪ್ರತ್ಯೇಕವ್ಯವಸ್ಥೆಯನ್ನು ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು

11) ಅಭಿವೃದ್ಧಿದಾರರು ಯೋಜನೆಯ ಒಳಾಂಗಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪರಿಸರ ಸಂರಕ್ಷಣೆಗೆ ಸಂಬಂದಿಸಿದ ಎಲ್ಲಾ ಅಗತ್ಯ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳತಕ್ಕದ್ದು.

12) ಅರ್ಜಿದಾರರು ಕಟ್ಟಡದ ಸ್ವಾಧೀನಾನುಭವ ಪತ್ರ ಪಡೆಯಲು ಯಾವುದೇ ತಪ್ಪು ದಾಖಲೆಗಳನ್ನೇನಾದರು ಸಲ್ಲಿಸಿರುವುದು ಕಂಡುಬಂದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ಸ್ವಾಧೀನಾನುಭವ ಪತ್ರವನ್ನು ರದ್ದುಪಡಿಸಲಾಗುವುದು ಹಾಗೂ ಕಾನೂನು ರೀತ್ಯಾ ಸೂಕ್ತ ಕ್ರಮಕ ತೆಗೆದುಕೊಳ್ಳಲಾಗುವುದು.

13) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ/ಹೊರಡಿಸುವ ಯಾವುದೇ ಷರತ್ತುಗಳಿಗೆ / ಆದೇಶಗಳಿಗೆ ಅರ್ಜಿದಾರರು ಭಧ್ದರಾಗಿರತಕ್ಕದ್ದು.

14) ಅಭಿವೃದ್ಧಿದಾರರು ಬೆಟರ್ ಮೆಂಟ್ ತೆರಿಗೆ ಪಾವತಿಸುವ ಕುರಿತು ಮಾನ್ಯ ಉಚ್ಚ ನ್ಯಾಯಾಲಯದ ನೀಡುವ 45727-45730/2011 (ಬೆಂಅಪ್ರಾ), ದಿನಾಂಕ: 03.09.2012ರ ತೀರ್ಮಾನದ ವಿರುದ್ಧ ಪ್ರಾಧಿಕಾರವು ಮೇಲ್ಮನವಿ ಸಲ್ಲಿಸಲು ತೀರ್ಮಾನಿಸಿದ್ದು, ಮೇಲ್ಮನವಿಯ ಕುರಿತು ನ್ಯಾಯಾಲಯ ನೀಡುವ ತೀರ್ಪಿಗೆ ಬದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ರವರಿಗೆ,

**ಮೆ॥ ಆದರ್ಶ ಡೆವಲಪರ್ಸ್,**
**ನಂ. 10, ವಿಠ್ಠಲ್ ಮಲ್ಯ ರಸ್ತೆ,**
**ಬೆಂಗಳೂರು 560001.**

ಯಥಾಪತ್ರಿಯನ್ನು ಪ್ರತಿಯನ್ನು ಕಾರ್ಯಪಾಲಕ ಅಭಿಯಂತರರು (ಪೂರ್ವ) ರವರ ಮಾಹಿತಿಗಾಗಿ ರವಾನಿಸಲಾಗಿದೆ.